ಕರ್ನಾಟಕ ವಿಧಾನ ಸಭೆ

338 ಶ್ರೀ ಹ್ಯಾರಿಸ್ ಎನ್.ಎ

ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು

ಅ) ರಾಜ್ಯದಲ್ಲಿ ಪಡಿತರ ಕಾರ್ಡ್‌ಗಳ ಹಂಚಿಕೆಯಲ್ಲಿ ಸರ್ಕಾರ ಕೈಗೊಂಡ ಯೋಜನಾ ಅನುಷ್ಠಾನದ ವಿವರಗಳೇನು;

ರಾಜ್ಯದಲ್ಲಿ ಎಲ್ಲಾ ವರ್ಗಗಳಿಗೆ ಪಡಿತರ ಚೀಟಿಗಳನ್ನು ವಿತರಿಸಲು ಮನೆ ಮನೆ ಸಮೀಕ್ಷೆ ಕೈಗೊಂಡು ಅರ್ಹ ಫಲಾನುಭವಿಗಳನ್ನು ಗುರುತಿಸಿ ವರ್ಗವಾರು ಪಡಿತರ ಚೀಟಿಗಳನ್ನು ನೀಡಲಾಗಿದೆ.

ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿ, ಅರ್ಹತೆಗೆ ಅನುಗುಣವಾಗಿ ಪಡಿತರ ಚೀಟಿಯನ್ನು ನೀಡಲಾಗಿದೆ.

ಪಡಿತರ ಚೀಟಿ ಪಡೆಯದೆ ಇರುವಂತಹ ಕುಟುಂಬಗಳಿಗೆ ಹೋಬಳಿ ಮಟ್ಟದಲ್ಲಿ ನೆಮ್ಮದಿ ಕೇಂದ್ರಗಳ ಮುಖಾಂತರ ಪಡಿತರ ಚೀಟಿಗಳನ್ನು ನೀಡಲಾಗುತ್ತಿದೆ.

ರಾಜ್ಯದಲ್ಲಿ ಭಾವಚಿತ್ರ ಮತ್ತು ಜೀವಮಾಪಕಗಳನ್ನು ಸೆರೆಹಿಡಿಯುವ ಸರ್ಕಾರದ ವಿಶೇಷ ಯೋಜನೆ ಅನುಷ್ಠಾನದಲ್ಲಿ ಇರುತ್ತದೆ.

ಆ) ನೆಮ್ಮದಿ ಕೇಂದ್ರಗಳ ಮೂಲಕ ಇದುವರೆವಿಗೂ ವಿತರಿಸಲಾಗಿರುವ ಬಿಪಿಎಲ್ ಕಾರ್ಡ್‌ಗಳ ಸಂಖ್ಯೆ ಎಷ್ಟು;
ಅವುಗಳಿಗೆ ಪಡಿತರ ಸಾಮಗ್ರಿಗಳನ್ನು ವಿತರಿಸಲು ಪ್ರಾರಂಭಿಸಲಾಗಿದೆಯೇ (ವಿವರ ನೀಡುವುದು);

ನೆಮ್ಮದಿ ಕೇಂದ್ರಗಳ ಮುಖಾಂತರ ದಿನಾಂಕ: 22.2.2009 ರವರೆಗೆ 23,19,025 ತಾತ್ಕಾಲಿಕ ಪಡಿತರ ಕೂಪನ್‌ಗಳನ್ನು ವಿತರಿಸಲಾಗಿದೆ.

ಇಲ್ಲ.

ಇ) ಬಿಪಿಎಲ್ ಕಾರ್ಡ್ ಫಲಾನುಭವಿಗಳಿಗೆ ವಿಧಿಸಲಾದ ಅರ್ಹತಾ ನಿಯಮಗಳೇನು;

ಅವುಗಳು ಇಂದಿನ ಆರ್ಥಿಕ ಸ್ಥಿತಿಗತಿಗಳಿಗೆ ಅನುಗುಣವಾಗಿವೆಯೇ;

<u>ಬಿಪಿಎಲ್ (ಅಕ್ಷಯ) ಪಡಿತರ ಚೀಟಿ ಫಲಾನುಭವಿಗಳಿಗೆ ಮಾನದಂಡಗಳು ಈ ಕೆಳಕಂಡಂತಿರುತ್ತದೆ :-</u>

ಗ್ರಾಮಾಂತರ ಪ್ರದೇಶದಲ್ಲಿ 12,000/- ರೂ.ಗಳವರೆಗಿನ ವಾರ್ಷಿಕ ವರಮಾನ, ಪಟ್ಟಣ ಪ್ರದೇಶದಲ್ಲಿ 17,000/- ರೂ.ಗಳವರೆಗಿನ ವಾರ್ಷಿಕ ವರಮಾನವುಳ್ಳ ಕುಟುಂಬಗಳು ಬಿಪಿಎಲ್ ಪಡಿತರ ಚೀಟಿಯನ್ನು ಪಡೆಯಲು ಅರ್ಹರು.

ಕೆಳಕಂಡ ಮಾನದಂಡಗಳಿಗೆ ಒಳಪಟ್ಟ ಕುಟುಂಬಗಳು ಅಕ್ಷಯ ಪಡಿತರ ಚೀಟಿ ಪಡೆಯಲು ಅರ್ಹರಿರುವುದಿಲ್ಲ.

(1) 3 ಹೆಕ್ಟೇರ್ ಒಣ ಭೂಮಿ ಅಥವಾ ತತ್ಸಮಾನವಾದ ನೀರಾವರಿ ಭೂಮಿ ಹೊಂದಿರುವವರು.

(2) ಸ್ಥಿರ ದೂರವಾಣಿ ಹೊಂದಿರುವವರು.

(3) ಸ್ವಂತವಾಗಿ ಡೀಸಲ್/ಪೆಟ್ರೋಲ್ ಇಂಧನ ಬಳಸುವ ವಾಹನ ಹೊಂದಿರುವವರು. (ಲೂನಾ/ ಟಿವಿಎಸ್ ಹೊಂದಿರುವವರನ್ನು ಹೊರತುಪಡಿಸಿ)

(4) ಬ್ಯಾಂಕ್/ಸಹಕಾರಿ ಸಂಘಗಳಲ್ಲಿ 1.00 ಲಕ್ಷಕ್ಕೂ ಮೇಲ್ಪಟ್ಟು ಸಾಲ ಪಡೆದಿರುವವರು;

(5) ಒಂದು ಬೋರ್ ವೆಲ್ ಹೊಂದಿ, ನೀರಾವರಿ ಸೌಕರ್ಯ ಪಡೆಯುತ್ತಿರುವವರು

(6) ತಿಂಗಳಿಗೆ ರೂ.1,000/– ಕ್ಕಿಂತ ಕಡಿಮೆ ಇಲ್ಲದೆ ವೇತನ ಪಡೆಯುವ ಸರ್ಕಾರಿ/ ಸರ್ಕಾರೇತರ/ ಖಾಸಗಿ ಸಿಬ್ಬಂದಿಗಳು

(7) ಆದಾಯ ತೆರಿಗೆ ಪಾವತಿಸುವವರು

(8) ನೊಂದಾಯಿತ ಗುತ್ತಿಗೆದಾರರು, ಎಪಿಎಂಸಿ ವಿತರಕರು/ಕಮೀಷನ್ ಏಜೆಂಟ್ಸ್/ಬೀಜ/ ರಸಾಯನಿಕ ಗೊಬ್ಬರ ಇತ್ಯಾದಿಗಳ ಮಾರಾಟಗಾರರು.

ಒಟ್ಟಾರೆ ಸಮೀಕ್ಷೆ ಮಾಡುವ ಸಂದರ್ಭದಲ್ಲಿ ಕುಟುಂಬದ ಜೀವನ ಮಟ್ಟವನ್ನು

ಕೂಡ ಸಮೀಕ್ಷೆ ಮಾಡಿ ನಿರ್ಣಯಿಸಲಾಗುವುದು.

<u>ನಗರ ಪ್ರದೇಶದಲ್ಲಿ ಮೇಲ್ಕಂಡ ಮಾನದಂಡಗಳ ಜೊತೆಗೆ ಈ ಕೆಳಕಂಡ ಮಾನದಂಡಗಳು ಒಳಗೊಂಡಿರುತ್ತವೆ:–</u>

(1) 20' * 30' ಚದರ ಅಡಿ ಅಥವಾ ಅದಕ್ಕಿಂತ ಕಡಿಮೆ ಅಳತೆಯುಳ್ಳ ನಿವೇಶನ ಅಥವಾ ಸರ್ಕಾರದ ಯಾವುದೇ ಗೃಹ ನಿರ್ಮಾಣ ಯೋಜನೆ ಅಡಿಯಲ್ಲಿ ಉಚಿತವಾಗಿ ಮನೆ ನೀಡಿರುವ ಕುಟುಂಬಗಳನ್ನು ಬಿಪಿಎಲ್‌ಗೆ ಒಳಪಟ್ಟಿರುವರೆಂದು ಪರಿಗಣಿಸುವುದು.

(2) ರಸ್ತೆ ಬದಿಯಲ್ಲಿ ಹಾಗೂ ಸಣ್ಣ ಪ್ರಮಾಣದ ಪೆಟ್ಟಿಗೆ ಅಂಗಡಿಗಳನ್ನು ಇಟ್ಟುಕೊಂಡು ಜೀವನೋಪಾಯಕ್ಕಾಗಿ ವ್ಯವಹಾರ ಮಾಡುತ್ತಿರುವವರನ್ನು ಹೊರತುಪಡಿಸಿ ಉಳಿದ ಸ್ವಂತ ಅಥವಾ ಬಾಡಿಗೆ ಅಂಗಡಿಗಳಲ್ಲಿ ವ್ಯಾಪಾರ ನಡೆಸುತ್ತಿರುವವರು ಎಪಿಎಲ್ ಅಥವಾ ಗೌರವಾನ್ವಿತ ಪಡಿತರ ಚೀಟಿಗೆ ಅರ್ಹರಿರುವರು.

(3) ವಾಸದ/ವಾಣಿಜ್ಯ ಉದ್ದೇಶಕ್ಕಾಗಿ ನೀಡಲಾಗಿರುವ ಅಥವಾ ಪಡೆಯಲಾಗಿರುವ ಕಟ್ಟಡಗಳಿಂದ ಬರುವ ಬಾಡಿಗೆ ಮಾಸಿಕ ರೂ.2000/– ಮೀರುವವರು ಬಿಪಿಎಲ್ ಪಡಿತರ ಚೀಟಿಗೆ ಅರ್ಹರಿರುವುದಿಲ್ಲ.

ಹೌದು.

ಹೌದು.

ಈ) ಅರ್ಹತಾ ಮಾನದಂಡಗಳನ್ನು ಬಡ ಮಧ್ಯಮ ವರ್ಗದ ಜನರು ಪಡೆಯುವಂತೆ ಸರಗ, ಸಮಂಜಸ ಹಾಗೂ ಸಾಮಾಜಿಕ ನ್ಯಾಯದ ವ್ಯಾಪ್ತಿಯಲ್ಲಿ ರೂಪಿಸಿ ಜಾರಿಗೊಳಿಸಲು ಸರ್ಕಾರ ಮುಂದಾಗುವುದೇ?

ಇದರಂತೆ ಮಾನದಂಡಗಳನ್ನು ನಿಗದಿಪಡಿಸಿ ಅನುಷ್ಠಾನಗೊಳಿಸಲಾಗುತ್ತಿದೆ.

ಆನಾಸ 41 ಡಿಆರ್ಎ 2009

(ಹೆಚ್. ಹಾಲಪ್ಪ)
ಆಹಾರ ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಸಚಿವರು.

ಕರ್ನಾಟಕ ವಿಧಾನ ಸಭೆ

339 ಶ್ರೀ ಎನ್.ಎ.ಹ್ಯಾರಿಸ್(ಶಾಂತಿನಗರ)

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು

ಅ) ರಾಜ್ಯದ ನಗರ ಹಾಗೂ ಗ್ರಾಮಾಂತರ ಪ್ರದೇಶದ ಮಹಿಳೆಯರ ಸಮಗ್ರ ಅಭಿವೃದ್ಧಿಗಾಗಿ ನೂತನ ಸರ್ಕಾರ ರೂಪಿಸಿರುವ ಯೋಜನೆಗಳಾವುವು (ವಿವರ ನೀಡುವುದು);

ರಾಜ್ಯದ ನಗರ ಹಾಗೂ ಗ್ರಾಮಾಂತರ ಪ್ರದೇಶದ ಮಹಿಳೆಯರಿಗೆ ಸ್ತ್ರೀಶಕ್ತಿ ಯೋಜನೆಯಡಿಯಲ್ಲಿ ಮಹಿಳಾ ಸ್ವಸಹಾಯ ಗುಂಪಿನ ಸದಸ್ಯರು ಬ್ಯಾಂಕುಗಳ ಮೂಲಕ ಪಡೆದ ಸಾಲಕ್ಕೆ ಶೇ.6 ರ ಬಡ್ಡಿ ಸಹಾಯ ಧನ ಒದಗಿಸುವ ಯೋಜನೆ.